**ಕರ್ನಾಟಕ ಸರ್ಕಾರ**
**ಉನ್ನತ ಶಿಕ್ಷಣ ಇಲಾಖೆ**
**ಬಹುಮಹಡಿಗಳ ಕಟ್ಟಡ ಬೆಂಗಳೂರು.**

**ಸಂಖ್ಯೆ**: ಇಡಿ 23 ಯುಡಿವಿ 2023 **ದಿನಾಂಕ**:05.08.2023

**ಅಧಿಸೂಚನೆ**

**ಮಂಗಳೂರು ವಿಶ್ವವಿದ್ಯಾಲಯದ ಕುಲಪತಿಗಳ ಹುದ್ದೆಯ ನೇಮಕಾತಿ**

1) ಮಂಗಳೂರು ವಿಶ್ವವಿದ್ಯಾಲಯದ ಕುಲಪತಿಯ ಹುದ್ದೆಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರ ಪ್ರಕರಣ 14(2) ರ ಉಪಬಂಧಗಳನುಸಾರ ನೇಮಕಾತಿ ಮಾಡಲು ಈ ಕೆಳಕಂಡ ಅರ್ಹತೆಯುಳ್ಳ ಪ್ರಾಧ್ಯಾಪಕರು/ಶಿಕ್ಷಣ ತಜ್ಞರುಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.-

I. ವಿಶ್ವವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರಾಗಿ ಕನಿಷ್ಠ 10 ವರ್ಷಗಳ ಕಾಲ ಸೇವೆ ಸಲ್ಲಿಸಿದ ಅಥವಾ ವಿಖ್ಯಾತ ಸಂಶೋಧನಾ/ಅಥವಾ ಶೈಕ್ಷಣಿಕ ಆಡಳಿತ ಸಂಸ್ಥೆಗಳಲ್ಲಿ ಕನಿಷ್ಠ 10 ವರ್ಷಗಳು ಕಾರ್ಯನಿರ್ವಹಿಸಿದ ಅನುಭವ, ಉನ್ನತ ಮಟ್ಟದ ಸಾಮರ್ಥ್ಯ, ಸಮಗ್ರತೆಯ ಶೈಕ್ಷಣಿಕ ನಾಯಕತ್ವವನ್ನು ಪ್ರದರ್ಶಿಸಿದ ಪುರಾವೆಗಳೊಂದಿಗೆ ನೈತಿಕ ಮೌಲ್ಯಗಳನ್ನು ಹಾಗೂ ಸಾಂಸ್ಥಿಕ ಬದ್ಧತೆಯನ್ನು ಹೊಂದಿರತಕ್ಕದ್ದು.

II. ಮಂಗಳೂರು ವಿಶ್ವವಿದ್ಯಾಲಯದ ಕುಲಪತಿಯು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರ ಪ್ರಕರಣ 14(5) ಹಾಗೂ 14(6)ರಲ್ಲಿ ನಿಯಮಿಸಿರುವಂತೆ, 04 ವರ್ಷಗಳು ಅಥವಾ 67 ವರ್ಷಗಳ ವಯಸ್ಸಾಗುವವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಕುಲಾಧಿಪತಿಗಳ ಇಷ್ಟಪರ್ಯಂತ ಪದಧಾರಣೆಯನ್ನು ಹೊಂದಿರುತ್ತಾರೆ. ಆದುದರಿಂದ, ಕುಲಾಧಿಪತಿಗಳ ಇಷ್ಟಪರ್ಯಂತ ನಾಲ್ಕು ವರ್ಷಗಳ ಪದಧಾರಣ ಅವಧಿಯ ಅವಕಾಶವಿರುವ ವಯೋಮಿತಿಯನ್ನು ಹೊಂದಿರತಕ್ಕದ್ದು.

2) ಮಂಗಳೂರು ವಿಶ್ವವಿದ್ಯಾಲಯದ ಕುಲಪತಿ ಹುದ್ದೆಯ ನೇಮಕಾತಿಗೆ ಉಮೇದುವಾರಿಕೆ ಸಲ್ಲಿಸಬಯಸುವ ಆಸಕ್ತರು ತಮ್ಮ ವಿದ್ಯಾರ್ಹತೆ, ಸಂಶೋಧನೆ, ಶೈಕ್ಷಣಿಕ ಮತ್ತು ಆಡಳಿತಾತ್ಮಕ ಅನುಭವಗಳು, ಸಾಧನೆಗಳು ಹಾಗೂ ಇತರೆ ವಿವರಗಳನ್ನು ಯುಜಿಸಿಯಿಂದ ನಿಗದಿಪಡಿಸಲಾಗಿರುವ ನಮೂನೆಯಲ್ಲಿ ಭರ್ತಿ ಮಾಡಿ ಮುದ್ರಿತ ಅರ್ಜಿಗಳನ್ನು ತ್ರಿಪ್ರತಿಗಳಲ್ಲಿ ಈ ನೇಮಕಾತಿ ಜಾಹೀರಾತು ಪ್ರಕಟಣೆಯಾದ 20 ದಿನಗಳ ಒಳಗಾಗಿ (ಸಾರ್ವತ್ರಿಕ ರಜಾ ದಿನಗಳು ಒಳಗೊಂಡಂತೆ) ಸ್ವೀಕೃತವಾಗುವಂತೆ. **"ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, 6ನೇ ಮಹಡಿ, ಗೇಟ್ ನಂ. 2, ಬಹುಮಹಡಿಗಳ ಕಟ್ಟಡ, ಬೆಂಗಳೂರು – 560 001"** ಇವರಿಗೆ ಸಲ್ಲಿಸತಕ್ಕದ್ದು. ಅರ್ಜಿ ನಮೂನೆಯನ್ನು ಒಳಗೊಂಡಿರುವ ಲಕೋಟೆಯ ಮೇಲೆ **"ಮಂಗಳೂರು ವಿಶ್ವವಿದ್ಯಾಲಯ ಕುಲಪತಿ ಹುದ್ದೆಗೆ ಅರ್ಜಿ"** ಎಂದು ಬರೆಯತಕ್ಕದ್ದು. ಪಿಡಿಎಫ್ (PDF) ರೂಪದ ವಿದ್ಯುನ್ಮಾನ ಅರ್ಜಿಗಳನ್ನು ಏಕ ಪ್ರತಿಯಲ್ಲಿ e-mail: souniversitysection2@gmail.com ಗೆ ನಿಗದಿತ ಅವಧಿಯೊಳಗೆ ಕಳುಹಿಸತಕ್ಕದ್ದು.

3) ಪ್ರಸ್ತುತ ಸೇವೆಯಲ್ಲಿರುವ ವ್ಯಕ್ತಿಗಳು ಅವರ ವಿರುದ್ಧ ಇಲಾಖಾ/ಕ್ರಿಮಿನಲ್ ವಿಚಾರಣೆಗಳು ಬಾಕಿ ಇರದ/ಹೂಡಲು ಉದ್ದೇಶಿಸಿರದ ಮತ್ತು ಈ ಹಿಂದೆ ವಿಚಾರಣೆಯನ್ನು ನಡೆಸಿ ದಂಡನೆ ವಿಧಿಸಲಾಗಿರದ ಬಗ್ಗೆ, ಹಾಗೂ ಕಳಂಕಿತ ಸೇವಾ ಚರಿತ್ರೆ ಹಾಗೂ ನೇಮಕಾತಿ ವಿವಾದಗಳನ್ನು ಹೊಂದಿರದ ಬಗ್ಗೆ ಅವರು ಸೇವೆ ಸಲ್ಲಿಸುತ್ತಿರುವ ಸಂಸ್ಥೆಯ ಮುಖ್ಯಸ್ಥರಿಂದ ದೃಢೀಕರಿಸಿ ಪ್ರಮಾಣ ಪತ್ರಗಳನ್ನು ಹಾಗೂ ಸೇವೆಯಿಂದ ವಯೋನಿವೃತ್ತಿ ಹೊಂದಿರುವವರು ಈ ಕುರಿತಂತೆ ಸ್ವಯಂ ದೃಢೀಕರಣ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು. ಪ್ರಮಾಣ ಪತ್ರಗಳಲ್ಲಿ ತಪ್ಪು ಮಾಹಿತಿ ನೀಡಿರುವುದು ಕಂಡು ಬಂದಲ್ಲಿ ಸಂಬಂಧಿಸಿದವರನ್ನು ಕಠಿಣ ಕ್ರಮಕ್ಕೆ ಗುರಿಪಡಿಸಲಾಗುವುದು. ಈ ರೀತಿಯಲ್ಲಿ ಪ್ರಮಾಣ ಪತ್ರಗಳನ್ನು ಸಲ್ಲಿಸದ ವ್ಯಕ್ತಿಗಳ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

4) ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ನಮೂನೆ/ಪ್ರಪತ್ರವನ್ನು ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರದ (https://hed.karnataka.gov.in) ಈ ಅಧಿಕೃತ ಜಾಲತಾಣದಿಂದ ಪಡೆಯಬಹುದು.

5) ಅಪೂರ್ಣ ಮತ್ತು ನಿರ್ದಿಷ್ಟಪಡಿಸಲಾದ ನಮೂನೆ ಪ್ರಪತ್ರದಲ್ಲಿರದ ಹಾಗೂ ನಿಗದಿತ ಅವಧಿ/ಗಡವು ಮುಕ್ತಯವಾದನಂತರ ಸ್ವೀಕೃತವಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಅಂಚೆ ಅಥವಾ ಇತರೆ ಸ್ವರೂಪದ ವಿಳಂಬಗಳಿಗೆ ಉನ್ನತ ಶಿಕ್ಷಣ ಇಲಾಖೆಯು ಜವಾಬ್ದಾರವಾಗುವುದಿಲ್ಲ.

ಸಹಿ/-

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ